**ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ ಸಂಖ್ಯೆ: 734/2017**

| | | |
|---|---|---|
| ಹೆಸರು | ಶ್ರೀ ಕೆ.ಸಿದ್ದು | ಚಾಸಾಃ 07 |
| ತಂದೆ ಹೆಸರು | ಶ್ರೀ ಲೇಟ್. ಕಾಳಬಸವನಾಯಕ | ಫ್ರಾಸಾಃ 07 |
| ವಯಸ್ಸು | 68 ವರ್ಷ | ಸಾಕ್ಷಿಯನ್ನು ದಿನಾಂಕಃ 15.04.2026 ರಂದು ಪ್ರಮಾಣೀಕರಿಸಲಾಯಿತು. |
| ಉದ್ಯೋಗ | ನಿವೃತ್ತ ತಹಶೀಲ್ದಾರ್ | |
| ವಾಸ | ಮೈಸೂರು | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ–**

2017 ನೇ ಸಾಲಿನಲ್ಲಿ ನಾನು ಗುಂಡ್ಲುಪೇಟೆಯಲ್ಲಿ ತಹಶೀಲ್ದಾರ್ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ಆಗ ಗುಂಡ್ಲುಪೇಟೆಯಲ್ಲಿ ಉಪಚುನಾವಣೆ ನಡೆಯುತ್ತಿತ್ತು. ಆಗ ಜಿಲ್ಲಾಧಿಕಾರಿಯವರು ಸೆಕ್ಟರ್ ಅಧಿಕಾರಿಗಳನ್ನು ನೇಮಿಸಿರುತ್ತಾರೆ. ಆ ಸಂಬಂಧವಾಗಿ ನಮ್ಮ ಉಪ ತಹಶೀಲ್ದಾರ್ ರವರಾಗಿದ್ದ ಎಸ್.ಬಿ. ರಾಜು ರವರು ದೃಢೀಕರಣ ಪತ್ರವನ್ನು ನೀಡಿರುತ್ತಾರೆ. ಸಾಕ್ಷಿಗೆ ಸದರಿ ದೃಢೀಕರಣ ಪತ್ರವನ್ನು ನೋಡಿ ಗುರುತಿಸಿರುತ್ತಾರೆ. ಆ ಕಾಲಕ್ಕೆ ಚಾಸಾ–1 ಮತ್ತು 2 ರವರನ್ನು ಸೆಕ್ಟರ್ ಆಧಿಕಾರಿಗಳಾಗಿ ಜಿಲ್ಲಾಧಿಕಾರಿಯವರು ನೇಮಕ ಮಾಡಿರುತ್ತಾರೆ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ**

ಜಿಲ್ಲಾಧಿಕಾರಿಯವರು ಸೆಕ್ಟರ್ ಅಧಿಕಾರಿಗಳನ್ನು ನೇಮಿಸಿದ್ದರು. ಸಾಕ್ಷಿ ಮುಂದುವರೆದು ಸೆಕ್ಟರ್ ಅಧಿಕಾರಿಗಳನ್ನು ನಾನು ನೇಮಿಸಿಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನ್ನ ಮುಂದೆ ಪೀರ್ಯಾದು ಮತ್ತು ಹೇಳಿಕೆಯನ್ನು ನೀಡಿಲ್ಲ ಎಂದರೆ ಸರಿ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ ಎಂದರೆ ಸರಿ.

**ಮರುವಿಚಾರಣೆ ಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಸಹಿ ಮಾಡಲಾಯಿತು)

**ಓ ಹೇ ಕೇ ಸ ಇ ಎ ಒ**

**(ಗಿರೀಶ ಆರ್.ಬಿ)**

**ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ**

**ಗುಂಡ್ಲುಪೇಟೆ**